**Akashvani : Bangalore**
**24.08.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**24.08.2024 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ಬೆಂಬಲ ಬೆಲೆಯಲ್ಲಿ ಹೆಸರುಕಾಳು, ಸೂರ್ಯಕಾಂತಿ ಖರೀದಿಗೆ ಕೇಂದ್ರ ಸರ್ಕಾರ ಸಮ್ಮತಿ**

**೨. ಅಡಿಕೆ ಬೆಳೆಗಾರರಿಗೆ ಬೆಳೆ ಪರಿಹಾರ; ಮುಖ್ಯಮಂತ್ರಿಯವರಿಗೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆಗ್ರಹ**

**೩. ಜಾತಿ ವ್ಯವಸ್ಥೆಯಿಂದ ಬಹುಜನರು ಶಿಕ್ಷಣದಿಂದ ವಂಚಿತ; ಮುಖ್ಯಮಂತ್ರಿ ಸಿದ್ದರಾಮಯ್ಯ**

**೪. ಹಾನಿಕಾರಕ ಅಂಶಗಳನ್ನು ಹೊಂದಿದ ವಿವಿಧ ೧೫೬ ಔಷಧಗಳನ್ನು ನಿಷೇಧಿಸಿದ ಕೇಂದ್ರ ಸರ್ಕಾರ**

**೫. ದೇಶದ ಜನತೆಯೊಂದಿಗೆ ನಾಳೆ ತಮ್ಮ ಮನದಾಳದ ಮಾತು ಹಂಚಿಕೊಳ್ಳಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ**

**<><*<><>*><>**

ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಮನವಿಗೆ ಸ್ಪಂದಿಸಿ, ಬೆಂಬಲ ಬೆಲೆ ಯೋಜನೆಯಲ್ಲಿ ಹೆಸರುಕಾಳು ಮತ್ತು ಸೂರ್ಯಕಾಂತಿ ಖರೀದಿಗೆ ಸಮ್ಮತಿಸಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಮಾರುಕಟ್ಟೆಯಲ್ಲಿ ಹೆಸರುಕಾಳು ಮತ್ತು ಸೂರ್ಯಕಾಂತಿ ಧಾರಣೆ ಕುಸಿದ ಕಾರಣ ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿಗೆ ಅನುಮತಿ ನೀಡುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ೨೨ ಸಾವಿರದ ೨೧೫ ಮೆಟ್ರಿಕ್ ಟನ್ ಹೆಸರುಕಾಳು ಹಾಗೂ ೧೩ ಸಾವಿರದ ೨೧೦ ಮೆಟ್ರಿಕ್ ಟನ್ ಸೂರ್ಯಕಾಂತಿ ಖರೀದಿಗೆ ಕೇಂದ್ರ ಸರ್ಕಾರ ಸಮ್ಮತಿಸಿದೆ. ಬೆಂಬಲ ಬೆಲೆ ಯೋಜನೆಯಲ್ಲಿ ಎಫ್ ಎ ಕ್ಯೂ ಗುಣಮಟ್ಟದ ಹೆಸರುಕಾಳಿಗೆ ಪ್ರತಿ ಕ್ವಿಂಟಲ್ಗೆ ೮ ಸಾವಿರದ ೬೮೨ ರೂಪಾಯಿ ಹಾಗೂ ಸೂರ್ಯಕಾಂತಿಗೆ ೭ ಸಾವಿರದ ೨೮೦ ರೂಪಾಯಿ ಬೆಲೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರ ರಾಜ್ಯದ ಪ್ರಸ್ತಾವನೆಗೆ ಸಮ್ಮತಿಸಿರುವುದರಿಂದ ಖರೀದಿ ಏಜನ್ಸಿ ನೇಮಕ ಮಾಡಿ ಆದೇಶ ಹೊರಡಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ. ಹೀಗಾಗಿ ಧಾರಣೆ ಕುಸಿದಿದೆ ಎಂದು ರೈತರು ಆತಂಕ ಪಡುವ ಅಗತ್ಯವಿಲ್ಲ. ಖರೀದಿ ಕೇಂದ್ರಗಳನ್ನು ಆರಂಭಿಸುತ್ತಿದ್ದಂತೆ ನೋಂದಣಿ ಮಾಡಿಸಿಕೊಂಡು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡಬಹುದು ಎಂದು ಸಚಿವರು ತಿಳಿಸಿದ್ದಾರೆ. ಹೆಸರುಕಾಳು ಮತ್ತು ಸೂರ್ಯಕಾಂತಿ ಬೆಳೆಯುವ ಪ್ರಮುಖ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಟಾಸ್ಕ್‌ಫೋರ್ಸ್ ಸಭೆ ನಡೆಸಿ ಅಗತ್ಯ ಇರುವ ಕಡೆ ಖರೀದಿ ಕೇಂದ್ರಗಳನ್ನು ಗುರುತಿಸಿ ನೋಂದಣಿ ಆರಂಭಿಸಲಿದ್ದಾರೆ. ನಂತರ ಖರೀದಿ ಪ್ರಕ್ರಿಯೆ ಪ್ರಾರಂಭವಾಗಲಿದೆ. ವಿಳಂಬ ಮಾಡದೆ ಟಾಸ್ಕ್ ಫೋರ್ಸ್ ಸಭೆ ನಡೆಸಲು ಜಿಲ್ಲಾಧಿಕಾರಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ರೈತರ ಹಿತದೃಷ್ಟಿಯಿಂದ ತ್ವರಿತವಾಗಿ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆ ಆರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಅಡಿಕೆ ಬೆಳೆಗಾರರಿಗೆ ಬೆಳೆ ಪರಿಹಾರ ಸಹಾಯಧನ ಮತ್ತು ಮೈಲುತುತ್ತ ಸಹಾಯಧನ ನೀಡುವಂತೆ ರಾಜ್ಯ ಸರ್ಕಾರಕ್ಕೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಒತ್ತಾಯಿಸಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು, ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಸಕ್ತ ವರ್ಷದಲ್ಲಿ ಅತಿವೃಷ್ಟಿ ಕಾರಣದಿಂದ ಪ್ರಾಕೃತಿಕ ಭೂ ವಿಕೋಪಗಳು ಜರುಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಈ ಬಾರಿಯ ಅತಿವೃಷ್ಟಿಯ ಪ್ರಭಾವ ಜಿಲ್ಲೆಯ ಬಹುತೇಕ ಎಲ್ಲಾ ವಿಧದ ಬೆಳೆಯ ಮೇಲು ಉಂಟಾಗಿದೆ. ವಾಡಿಕೆಗಿಂತ ಅಧಿಕ ಮಳೆಯಿಂದಾಗಿ ಜಿಲ್ಲೆಯ ರೈತ ವರ್ಗದ ಜೀವನಾಡಿಯಾದ ಅಡಿಕೆ ಬೆಳೆ ಮತ್ತು ಕಾಳುಮೆಣಸಿಗೆ ಕೊಳೆ ರೋಗವು ತಗುಲಿದ ಪರಿಣಾಮ ತೀವ್ರ ನಷ್ಟ ಉಂಟಾಗಿದೆ.  ಎಲೆಚುಕ್ಕೆ ರೋಗ ಭಾದೆಯಿಂದ ಅಧಿಕ ಪ್ರಮಾಣದಲ್ಲಿ ಅಡಿಕೆ ಮರಗಳು ಈಗಾಗಲೇ ನಶಿಸುತ್ತಿದ್ದು, ಕೊಳೆ ರೋಗವು ರೈತರ ಜೀವನದ ಮೇಲೆ ಮತ್ತೊಂದು ಬರೆ ಎಳೆದಂತಾಗಿದೆ. ಹೀಗಾಗಿ ಈ ಪ್ರದೇಶದಲ್ಲಿ ಹೋಬಳಿವಾರು ಅಡಿಕೆ ಬೆಳೆ ಸಮೀಕ್ಷೆ ನಡೆಸಲು ಆದೇಶಿಸಿ, ಬೆಳೆಗಳ ಸ್ಥಿತಿಗತಿಯ ಬಗ್ಗೆ ವಸ್ತುನಿಷ್ಠ ವರದಿ ಪಡೆದು, ಅಡಿಕೆ ಮತ್ತು ಕಾಳುಮೆಣಸು ಬೆಳೆಗೆ ಬೆಳೆ ಪರಿಹಾರ ಸಹಾಯಧನ ಮತ್ತು ಔಷಧಿ ಸಿಂಪಡನೆಗೆ ಅಗತ್ಯವಿರುವ ಮೈಲುತುತ್ತ ಸಹಾಯಧನ ನೀಡಬೇಕೆಂದು ಅವರು ಪತದ ಮೂಲಕ ಒತ್ತಾಯಿಸಿದ್ದಾರೆ.

**<><*<><>*><>**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ವಿಚಾರಗಳು, ಸಮಾಜಕ್ಕೆ ನೀಡಿದ ಮಾರ್ಗದರ್ಶನಗಳು ೨೦ನೇ ಶತಮಾನಕ್ಕೆ ಮಾತ್ರ ಸೀಮಿತವಾಗಿಲ್ಲ; ಈಗಿನ ಕಾಲಕ್ಕೂ ಅತ್ಯಂತ ಪ್ರಸ್ತುತವಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ಗಾಂಧಿ ಭವನದಲ್ಲಿಂದು ಗಾಂಧಿ ಸ್ಮಾರಕ ನಿಧಿಯ ೭೫ನೇ ವರ್ಷದ ಸಂಸ್ಮರಣೆಗಾಗಿ ಆಯೋಜಿಸಲಾಗಿದ್ದ "೨೧ನೇ ಶತಮಾನಕ್ಕೆ ಮಹಾತ್ಮಗಾಂಧೀಜಿ" ಅಂತಾರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಗಾಂಧೀಜಿಯವರು ಶಾಂತಿ, ಸತ್ಯ, ನ್ಯಾಯ ಮತ್ತು ಬ್ರಾತೃತ್ವವನ್ನು ಬದುಕಿನುದ್ದಕ್ಕೂ ಆಚರಿಸಿಕೊಂಡು ಬಂದಿದ್ದಾರೆ. ಇಡೀ ವಿಶ್ವವೇ ಪರಸ್ಪರ ಪ್ರೀತಿಸುವ ಗುಣವನ್ನು ರೂಢಿಸಿಕೊಂಡರೆ ಇಡೀ ಸಮಾಜ ನೆಮ್ಮದಿಯಿಂದ ಇರಬಹುದು ಎಂದರು. ಧರ್ಮ-ಜಾತಿ ಹೆಸರಲ್ಲಿ ಸಮಾಜವನ್ನು ಒಡೆಯುತ್ತಾ ಹೋದಂತೆ ಅಸಮಾನತೆ ಹೆಚ್ಚುತ್ತದೆ ಎಂದು ಹೇಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಾತಿ ವ್ಯವಸ್ಥೆ ಕಾರಣದಿಂದ ಬಹುಜನರು ಶಿಕ್ಷಣದಿಂದ ವಂಚಿತರಾದರು. ಈ ಕಾರಣಕ್ಕೆ ಅಸಮಾನತೆ ಹೆಚ್ಚಾಯಿತು. ಆದರೆ, ಇತ್ತೀಚೆಗೆ ವಿದ್ಯಾವಂತರೇ ಹೆಚ್ಚೆಚ್ಚು ಜಾತಿವಾದಿಗಳಾಗುತ್ತಿರುವುದು ದುರಂತ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಪ್ರಕೃತಿ ನಮ್ಮ ಅಗತ್ಯಗಳನ್ನು ಈಡೇರಿಸುತ್ತದೆಯೇ ಹೊರತು, ದುರಾಸೆಗಳನ್ನು ಅದು ಪೂರೈಸುವುದಿಲ್ಲ ಎನ್ನುವುದು ಗಾಂಧಿಯವರ ನಂಬಿಕೆಯಾಗಿತ್ತು. ಕೇರಳದ ವಯನಾಡ್ ಮತ್ತು ರಾಜ್ಯದ ನಾನಾ ಕಡೆ ನಡೆಯುತ್ತಿರುವ ಪರಿಸರ ಅವಘಡಗಳಿಗೆ ಮನುಷ್ಯನ ದುರಾಸೆಗಳೇ ಕಾರಣವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಪಾದಿಸಿದರು.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಕಳೆದ ೧೫ ತಿಂಗಳಲ್ಲಿ ಮುಡಾ ಒಂದರಲ್ಲೇ ೫ ಸಾವಿರ ಕೋಟಿಗೂ ಅಧಿಕ ಮೊತ್ತದ ಅವ್ಯವಹಾರ ನಡೆದಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹುಬ್ಬಳ್ಳಿಯಲ್ಲಿಂದು ಹೇಳಿದ್ದಾರೆ. ರಾಜ್ಯದಲ್ಲಿ ರಾಜಕೀಯ ಇತಿಹಾಸದಲ್ಲಿ ಕಂಡು ಕೇಳರಿಯದ ಹಗರಣ ಇದಾಗಿದೆ. ಬಡವರ ಪಾಲಾಗಬೇಕಾಗಿದ್ದ ನಿವೇಶನಗಳಲ್ಲಿ ರಿಯಲ್ ಎಸ್ಟೇಟ್ ಉದ್ಯಮಿಗಳಿಗೆ, ಕಾಂಗ್ರೆಸ್ ಮುಖಂಡರಿಗೆ ನೀಡಿರುವುದು ಅಕ್ಷಮ್ಯ ಅಪರಾಧ. ಮುಖ್ಯಮಂತ್ರಿ ಸಿದ್ದರಾಮಯ್ಯ

ಪಡೆದಿರುವ  ೧೪ ನಿವೇಶನ ಸೇರಿದಂತೆ  ಅಲ್ಲಿ ನಡೆದಿರುವ  ೫ ಸಾವಿರ ಕೋಟಿ ರೂಪಾಯಿ ಮೊತ್ತದ ಹಗರಣವನ್ನು  ಸಿಬಿಐ ತನಿಖೆಗೆ ವಹಿಸುವಂತೆ ಒತ್ತಾಯಿಸಿದರು. ಯಾವುದೇ ಆಯೋಗ ಅಥವಾ  ವಿಶೇಷ ತನಿಖಾ ತಂಡದಿಂದ ನ್ಯಾಯ ಸಿಗಲು ಸಾಧ್ಯವಿಲ್ಲ. ಹೀಗಾಗಿ  ಈ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಹೇಳಿದ ಅವರು, ಸಮಾಜವಾದಿ ಎಂದು ಹೇಳಿಕೊಂಡು ಬಂದ  ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಖವಾಡ ಕಳಚಿಬಿದ್ದಿದೆ ಎಂದರು. ಇದಕ್ಕೂ ಮುನ್ನ ಕೇಂದ್ರ ಸಚಿವ  ಪ್ರಲ್ಹಾದ್ ಜೋಷಿ ಅವರ ನಿವಾಸಕ್ಕೆ ತೆರಳಿ  ಪ್ರಸ್ತುತ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚೆ ನಡೆಸಿದರು.

<><*<><>*><>

ಹಾನಿಕಾರಕ ಅಂಶಗಳನ್ನು ಹೊಂದಿರುವ ಕಾರಣದೊಂದಿಗೆ ವಿವಿಧ ೧೫೬ ವಿವಿಧ ಔಷಧಿಗಳನ್ನು ಕೇಂದ್ರ ಸರ್ಕಾರ ನಿಷೇಧಿಸಿದೆ. ಎರಡು ಅಥವಾ ಅದಕ್ಕಿಂತ ಹೆಚ್ಚು ಔಷಧ ರಾಸಾಯನಿಕಗಳ ಸಂಯೋಜನೆಯ ಫಿಕ್ಸೆಡ್ ಡೋಸ್ ಡ್ರಗ್ಸ್‌ಗಳು ಸೇವನೆಗೆ ಯೋಗ್ಯವಲ್ಲ ಎಂದು ಪರಿಗಣಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಹೊರಡಿಸಿರುವ ಅಧ್ಯಾದೇಶದಲ್ಲಿ ತಿಳಿಸಲಾಗಿದೆ. ಆಂಟಿಬಯೋಟಿಕ್‌ಗಳು, ನೋವು ನಿವಾರಕಗಳು ಮತ್ತು ಮಲ್ಟಿ-ವಿಟಮಿನ್‌ಗಳು ಸೇರಿದಂತೆ ೧೫೬ ಬಗೆಯ ಔಷಧಿಗಳು ಆರೋಗ್ಯಕ್ಕೆ ಅಪಾಯವನ್ನುಂಟು ಮಾಡುತ್ತವೆ ಎಂದು ತಿಳಿಸಿದೆ.  ಔಷಧಗಳ ತಾಂತ್ರಿಕ ಸಲಹಾ ಮಂಡಳಿ ಸಲಹೆ ಮೇರೆಗೆ ಔಷಧಗಳ ಉತ್ಪಾದನೆ, ಮಾರಾಟ, ವಿತರಣೆ ಮೇಲೆ ನಿಷೇಧ ಹೇರಲಾಗಿದೆ.

<><*<><>*><>

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ನಾಳೆ ಬೆಳಗ್ಗೆ ೧೧ ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೩ನೇ ಆವೃತ್ತಿಯಾಗಿದ್ದು, ಜನರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು ಮೈ ಜಿ.ಒ.ವಿ. ಓಪನ್ ಫೋರಂ, ನಮೋ ಆಪ್ ಅಥವಾ ಉಚಿತ ಸಹಾಯವಾಣಿ ಸಂಖ್ಯೆ ೧೮೦೦-೧೧-೭೮೦೦ ಮೂಲಕ, ಹಂಚಿಕೊಳ್ಳಬಹುದು. ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರವಾಗಲಿದೆ. ಅಲ್ಲದೇ ಎಐಆರ್ ನ್ಯೂಸ್, ಡಿಡಿನ್ಯೂಸ್, ಪಿಎಂಒ ಮತ್ತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾಲನ್‌ಗಳಲ್ಲಿ ನೇರ ಪ್ರಸಾರ ಭಿತ್ತರವಾಗಲಿದೆ. ಮನ್ ಕಿ ಬಾತ್ ಕಾರ್ಯಕ್ರಮದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾಗೆ ಭರದ ಸಿದ್ದತೆ ನಡೆಯುತ್ತಿದ್ದು, ಈ ಬಾರಿಯ ದಸರಾದಲ್ಲಿ ಪಾಲ್ಗೊಳ್ಳಲು ಕಾಡಿನಿಂದ ಮೈಸೂರು ಅರಮನೆ ಪ್ರವೇಶ ಮಾಡಿರುವ ಗಜಪಡೆಗೆ ಇಂದು ಬೆಳಗ್ಗೆ ತೂಕ ಮತ್ತು ಆರೋಗ್ಯ ಪರೀಕ್ಷೆ ಮಾಡಲಾಯಿತು. ಮೈಸೂರಿನ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಂ ತೂಕ ಮಾಪನ ಕೇಂದ್ರದಲ್ಲಿ ಜಂಬೂ ಸವಾರಿ ಹೊರುವ ಅಭಿಮನ್ಯು ನೇತೃತ್ವದಲ್ಲಿ ೯ ಆನೆಗಳಿಗೆ ತೂಕ ಪರೀಕ್ಷೆ ಮಾಡಲಾಗಿದ್ದು, ೫ ಸಾವಿರದ ೫೬೦ ಕೆಜಿ ತೂಕ ಇರುವ ಅಭಿಮನ್ಯು ಅತೀ ಹೆಚ್ಚು ತೂಕ ಹೊಂದಿರುವ ಆನೆಯಾಗಿದೆ. ಧನಂಜಯ ೫ ಸಾವಿರದ ೧೫೫ ಕೆಜಿ ತೂಕ ಹೊಂದಿದ್ದು, ಗೋಪಿ  ೪ ಸಾವಿರದ ೯೭೦, ಭೀಮ ೪ ಸಾವಿರದ ೯೪೫, ಏಕಲವ್ಯ ೪ ಸಾವಿರದ ೭೩೦, ಕಂಜನ್ ೪ ಸಾವಿರದ ೫೧೫, ರೋಹಿತ್ ೩ ಸಾವಿರದ ೬೨೫, ವರಲಕ್ಷ್ಮಿ ೩ ಸಾವಿರದ ೪೯೫ ಹಾಗೂ ಲಕ್ಷ್ಮೀ ೨ ಸಾವಿರದ ೪೮೦ ಕೆ ಜಿ ತೂಕವನ್ನು ಹೊಂದಿದೆ. ಎಲ್ಲ ಆನೆಗಳ ಆರೋಗ್ಯ ಉತ್ತಮವಾಗಿದೆ.

ಆನೆಗಳ ತೂಕದ ಆಧಾರದ ಮೇಲೆ ಪೌಷ್ಟಿಕ ಆಹಾರ ನೀಡಲಾಗುವುದುಹಾಗೂ ನಾಳೆಯಿಂದ ಆನೆಗಳಿಗೆ ತಾಲಿಮು ಪ್ರಾರಂಭವಾಗಲಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಪ್ರಭುಗೌಡ ತಿಳಿಸಿದ್ದಾರೆ.

**<><*<><>*><>**

ದ್ವಿದಳ ಧಾನ್ಯ ಬೆಳೆಗಳ ಉತ್ಪಾದನೆ ಹಾಗೂ ಉತ್ಪಾದಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅಧಿಕ ಇಳುವರಿ ಕೊಡುವ ತಳಿಗಳ ಬಿತ್ತನೆಗೆ ರೈತರು ಹೆಚ್ಚು ಆಸಕ್ತಿ ತೋರಬೇಕೆಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಬೇಸಾಯ ತಜ್ಞ ಡಾ.ಮಲ್ಲಿಕಾರ್ಜುನ ತಿಳಿಸಿದರು. ತೊಗರಿ ಬೆಳೆಗೆ ಔಷಧಿ ಸಿಂಪರಣೆ ಹಾಗೂ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೃಷಿಯಲ್ಲಿ ಡ್ರೋನ್ ಬಳಸಿ ರಾಸಾಯನಿಕ ಸಿಂಪರಣೆ ಮಾಡುವುದರಿಂದ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡಬಹುದಲ್ಲದೇ ಹೆಚ್ಚು ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ಭವಿಷ್ಯದಲ್ಲಿ ಕೂಲಿಕಾರ್ಮಿಕರ ಸಮಸ್ಯೆ ನಿವಾರಣೆಗೆ ಡ್ರೋನ್ ಸೂಕ್ತ ಪರಿಹಾರ ನೀಡಲಿದೆ ಎಂದರು.

**<><*<><>*><>**

ಉಡುಪಿ ಜಿಲ್ಲೆಯಲ್ಲಿ ಮೂಲನಿವಾಸಿಗಳಾದ ಕೊರಗ ಸಮುದಾಯದವರಿಗೆ ಪ್ರಧಾನಮಂತ್ರಿ ಜನ್ ಜಾತಿ ಆದಿವಾಸಿ ಮಹಾ ಅಭಿಯಾನ ಯೋಜನೆಯಡಿ ಕೇಂದ್ರ ಸರ್ಕಾರದ ವಿವಿಧ ೯ ಇಲಾಖೆಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಜಿಲ್ಲೆಯಲ್ಲಿ ನಿನ್ನೆಯಿಂದ ಸೆಪ್ಟಂಬರ್ ೧೦ರವರೆಗೆ ಆಧಾರ್ ನೋಂದಣಿ, ಜನ್ ಧನ್ ಬ್ಯಾಂಕ್ ಖಾತೆ, ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್, ಜಾತಿ ಪ್ರಮಾಣ ಪತ್ರ, ಸಿಕಲ್ ಸೆಲ್ ಅನೀಮಿಯ, ಸ್ಕ್ರೀನಿಂಗ್, ಪಡಿತರ ಚೀಟಿ, ಪ್ರಧಾನಮಂತ್ರಿ ಮಾತೃ ವಂದನಾ ಕಾರ್ಯಕ್ರಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಪ್ರಯೋಜನವನ್ನು ಜಿಲ್ಲೆಯ ಕೊರಗ ಸಮುದಾಯದವರು ಪಡೆದುಕೊಳ್ಳಬಹುದಾಗಿದೆ.

**<><*<><>*><>**

ರೈತರು ತಮ್ಮ ಬೆಳೆಗಳಿಗೆ ಕೀಟನಾಶಕಗಳನ್ನು ಬಳಕೆ ಮಾಡುವುದನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರಗಳು ಅಂತರ ಸಚಿವಾಲಯಗಳ ಸಮಿತಿಗಳನ್ನು ರಚನೆ ಮಾಡಬೇಕು ಎಂದು ಭಾರತೀಯ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರ, ಎಫ್ಎಸ್ಎಸ್ಎಐ ಸೂಚನೆ ನೀಡಿದೆ. ಕೃಷಿಕರ ಮಟ್ಟದಲ್ಲಿಯೇ ಕೀಟನಾಶಕಗಳ ಬಳಕೆ ಕುರಿತು ರಾಜ್ಯ ಸರ್ಕಾರಗಳು ನಿಗಾ ವಹಿಸಬೇಕು ಎಂದು ಪ್ರಾಧಿಕಾರ ತಿಳಿಸಿದೆ

**<><*<><>*><>**

ರಾಷ್ಟ್ರ ಮತ್ತು ಅಂತರಾಷ್ಟ್ರಿಯ ಮಟ್ಟದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಗದಗ ಜಿಲ್ಲಾ ಕ್ರೀಡಾಪಟುಗಳಿಗೆ ಆವರ ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಕೇಂದ್ರ ಸರ್ಕಾರ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ ೧೫ ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ, ದೂರವಾಣಿ ಸಂಖ್ಯೆ ೦೮೩೭೨- ೨೩೮೩೪೫ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೭.೪೦ ಕ್ಕೆ <>*><>**